# ಮಾಜಿ ಸಚಿವ ಜೈಪಾಲ್ ರೆಡ್ಡಿ ಇನ್ನಿಲ್ಲ

**ಹೈದರಾಬಾದ್:** ಚತುರ ಮಾತುಗಾರಿಕೆಯ ಮೂಲಕವೇ ಸಂಸತ್ತು ಮತ್ತು ವಿಧಾನಸಭೆಯಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದ ಕಾಂಗ್ರೆಸ್‌ನ ಹಿರಿಯ ಮುಖಂಡ, ಕೇಂದ್ರದ ಮಾಜಿ ಸಚಿವ ಎಸ್.ಜೈಪಾಲ್ ರೆಡ್ಡಿ (77) ಭಾನುವಾರ ಹೈದರಾಬಾದ್‌ನ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ.

ವಿಷಮಶೀತ ಜ್ವರದಿಂದ ಆಸ್ಪತ್ರೆಗೆ ದಾಖಲಾಗಿದ್ದ ಅವರು ಬೆಳಗಿನ ಜಾವ 1.30ರ ಸುಮಾರಿಗೆ ಕೊನೆಯುಸಿರೆಳೆದರು. ಅವರಿಗೆ ಇಬ್ಬರು ಪುತ್ರರು ಮತ್ತು ಒಬ್ಬ ಪುತ್ರಿ ಇದ್ದಾರೆ.



ಪ್ರಧಾನಿ ನರೇಂದ್ರ ಮೋದಿ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸೇರಿದಂತೆ ರಾಜಕೀಯ ಮುಖಂಡರು ಪಕ್ಷಭೇದ ಮರೆತು ಹಿರಿಯ ನಾಯಕನ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ. ರೆಡ್ಡಿ ಅವರ ಅಂತ್ಯಕ್ರಿಯೆ ಸೋಮವಾರ ಮಧ್ಯಾಹ್ನ 1ರಿಂದ 1.30ರ ಅವಧಿಯಲ್ಲಿ ಹುಸೇನ್‌ಸಾಗರ್ ಪಕ್ಕದಲ್ಲಿರುವ ಪಿ.ವಿ.ಘಾಟ್‌ನಲ್ಲಿ ಸರಕಾರಿ ಗೌರವದೊಂದಿಗೆ ನಡೆಯಲಿದೆ ಎಂದು ತೆಲಂಗಾಣ ಸಿಎಂ ಕೆ. ಚಂದ್ರಶೇಖರ ರಾವ್ ತಿಳಿಸಿದ್ದಾರೆ.

## ಮೇರು ಮನೋಬಲ

1942ರ ಜನವರಿ 16ರಂದು ಈಗಿನ ತೆಲಂಗಾಣದ ಮುದ್ಗಲ್ ಗ್ರಾಮದಲ್ಲಿ ಜನಿಸಿದ್ದ ರೆಡ್ಡಿ, ಹೈದರಾಬಾದನಲ್ಲಿ ಪ್ರಾಥಮಿಕ, ಪ್ರೌಢ ಶಿಕ್ಷಣ ಮುಗಿಸಿ, ಪ್ರತಿಷ್ಠಿತ ಒಸ್ಮಾನಿಯಾ ವಿಶ್ವವಿದ್ಯಾಲಯದಲ್ಲಿ ಪದವಿ ಪಡೆದರು. ಕಿರಿಯ ವಯಸ್ಸಿನಲ್ಲಿಯೇ ಪೋಲಿಯೋ ಪೀಡಿತರಾಗಿದ್ದ ಅವರು, ದೈಹಿಕ ನ್ಯೂನತೆಯನ್ನು ಮೆಟ್ಟಿ ನಿಂತು ರಾಜಕೀಯದಲ್ಲಿ ಮೇರು ಸಾಧನೆ ಮಾಡಿದರು.

1960ರ ದಶಕದ ಆರಂಭದಲ್ಲಿ ಕಾಂಗ್ರೆಸ್ ಪಕ್ಷ ಸೇರುವ ಮೂಲಕ ತಮ್ಮ ರಾಜಕೀಯ ಯಾತ್ರೆ ಆರಂಭಿಸಿದ ರೆಡ್ಡಿ, 1975ರಲ್ಲಿ ತುರ್ತು ಪರಿಸ್ಥಿತಿ ವೇಳೆ ಕಾಂಗ್ರೆಸ್ ವಿರುದ್ಧ ಪ್ರತಿಭಟಿಸಿ ಸೆರೆವಾಸ ಅನುಭವಿಸಿದ್ದರು. ಬಳಿಕ ಜನತಾ ಪಾರ್ಟಿ ಸೇರಿದರು. 1985ರಿಂದ 1988ರವರೆಗೆ ಜನತಾ ಪಕ್ಷದ ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದರು. ನಂತರ 1990ರಲ್ಲಿ ಪುನಃ ಕಾಂಗ್ರೆಸ್‌ಗೆ ಮರಳಿ ಕೊನೆವರೆಗೂ ಉಳಿದರು.

ರಾಜಕೀಯ ತೀವ್ರ ತಳಮಳದ ಸನ್ನಿವೇಶಗಳ ನಡುವೆ ಬೆಳೆದು ಬಂದ ರೆಡ್ಡಿ ಐದು ಬಾರಿ ಲೋಕಸಭೆ ಸದಸ್ಯರಾಗಿ, ಎರಡು ಅವಧಿ ರಾಜ್ಯಸಭೆ ಸದಸ್ಯರಾಗಿ ಹಾಗೂ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದರು. ಅಸ್ಖಲಿತ ಮಾತುಗಾರಿಕೆ, ಅಧ್ಯಯನದಿಂದ ಅತ್ಯುತ್ತಮ ಸಂಸದೀಯಪಟುವಾಗಿ ಗುರುತಿಸಿಕೊಂಡಿದ್ದರು. ಕೇಂದ್ರದಲ್ಲಿ ಐ.ಕೆ.ಗುಜ್ರಾಲ್ ಸಂಪುಟದಲ್ಲಿ ಮೊದಲ ಬಾರಿ ವಾರ್ತಾ ಸಚಿವರಾಗಿ ಸೇವೆ ಸಲ್ಲಿಸಿದರು. ನಂತರ ಡಾ.ಮನಮೋಹನ್ ಸಿಂಗ್ ಸಂಪುಟದಲ್ಲಿ ಎರಡು ಅವಧಿಯಲ್ಲೂ ಪ್ರಮುಖ ಖಾತೆಗಳನ್ನು ನಿರ್ವಹಿಸಿದ್ದರು. ಅಖಂಡ ಆಂಧ್ರಪ್ರದೇಶದಿಂದ ತೆಲಂಗಾಣ ಪ್ರತ್ಯೇಕಗೊಳ್ಳಬೇಕು ಎಂದು ಪ್ರತಿಪಾದಿಸಿದ್ದ ಮುಖಂಡರಲ್ಲಿ ಜೈಪಾಲ್ ರೆಡ್ಡಿ ಕೂಡ ಒಬ್ಬರು.